**1 ನೇ ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸಾಗರ**

**ಸಿ.ಸಿ ಸಂಖ್ಯೆಃ 1430/2025**

**ಸಿ.ಡಬ್ಲ್ಯೂ -1, ಪಿ.ಡಬ್ಲ್ಯೂ -1**

| | | |
|---|---|---|
| ಸಾಕ್ಷಿದಾರರ ಹೆಸರು | : | ಮಲ್ಲಿಕಾರ್ಜುನ |
| ತಂದೆಯ ಹೆಸರು | : | ಭರಮಪ್ಪ |
| ವಯಸ್ಸು | : | 40 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ | : | ಕಣಸೆ ಗ್ರಾಮ, ಸಾಗರ ತಾಲ್ಲೂಕು. |

**ಪ್ರಮಾಣೀಕರಿಸಿದ ದಿನಾಂಕ : 28.07.2026.**

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

1. ಚಾಸ 2 ನನ್ನ ತಾಯಿ. ಚಾಸ 3 ರಿಂದ 6 ರವರ ಪರಿಚಯವಿದೆ. ಆರೋಪಿತರ ಪರಿಚಯವಿದೆ. ಆರೋಪಿತರು ಮತ್ತು ನಮ್ಮ ನಡುವೆ ಯಾವುದೇ ಜಗಳವಾಗಿರುವುದಿಲ್ಲ. ಆರೋಪಿತರು ನಮಗೆ ಹೊಡಿ ಬಡಿ ಮಾಡಿ, ಅವಾಚ್ಯ ಶಬ್ದಗಳಿಂದ ನಿಂದಿಸಿ ಜೀವ ಬೆದರಿಕೆ ಹಾಕಿರುವುದಿಲ್ಲ. ನಾನು ನನ್ನ ಸಹಿಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಗೆ ಕಡತದಿಂದ ಒಂದು ದಾಖಲೆಯನ್ನು ತೆಗೆದು ತೋರಿಸಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಪಿರ್ಯಾದಾಗಿದ್ದು, ಅದನ್ನು ನಿಪಿ 1 ಎಂದು, ಸಾಕ್ಷಿಯ ಸಹಿಯನ್ನು ನಿಪಿ 1(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಸ್ಥಳ ಪಂಚನಾಮೆ ಮತ್ತು ಅದರ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸ್ಥಳ ಪಂಚನಾಮೆಯನ್ನು ನಿಪಿ 2 ಎಂದು, ಸಾಕ್ಷಿಯ ಸಹಿಯನ್ನು ನಿಪಿ 2(ಎ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯು ಪಿರ್ಯಾದಿಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ ಆಲಿಸಿ ಅನುಮತಿಯನ್ನು ನೀಡಲಾಯಿತು.)

ಪಾಟೀ ಸವಾಲುಃ- ಸ.ಸ.ಅ. ರವರಿಂದಃ-

1. ದಿಃ09.09.2025 ರಂದು ರಾತ್ರಿ 9 ಗಂಟೆಯ ಸಮಯದಲ್ಲಿ ನಾನು ಮತ್ತು ಚಾಸ 2 ಬೈಕಿನಲ್ಲಿ ಬರುತ್ತಿದ್ದಾಗ ಆರೋಪಿತರು ಜಮೀನಿನ ಬೇಲಿ ಮಾಡಿದ ವಿಚಾರಕ್ಕೆ ನನ್ನನ್ನು ಮತ್ತು ಚಾಸ 2

ರವರನ್ನು ಅಡ್ಡಗಟ್ಟಿರುತ್ತಾರೆ ಎಂದರೆ ಸರಿಯಲ್ಲ. 1 ನೇ ಆರೋಪಿ ಬೈಕಿಕೆ ಒದ್ದು ನನ್ನನ್ನು ಮತ್ತು ಚಾಸ 2 ರವರನ್ನು ಕೆಳಗೆ ಬೀಳಿಸಿರುತ್ತಾನೆ ಎಂದರೆ ಸರಿಯಲ್ಲ. 1 ನೇ ಆರೋಪಿ 2 ನೇ ಆರೋಪಿಯ ಕೈಯಲ್ಲಿದ್ದ ರಾಡನ್ನು ತೆಗೆದುಕೊಂಡು ನನ್ನ ಬಲಮುಂಗೈಗೆ ಹೊಡೆದ ಎಂದರೆ ಸರಿಯಲ್ಲ. 2 ನೇ ಆರೋಪಿ ತನ್ನ ಕೈಯಲ್ಲಿದ್ದ ಕತ್ತಿಯನ್ನು ಹಿಂಭಾಗ ಮಾಡಿ ನನ್ನ ಎಡ ತಲೆಗೆ ಹೊಡೆದ ಎಂದರೆ ಸರಿಯಲ್ಲ. 3 ನೇ ಆರೋಪಿ ಕೋಲಿನಿಂದ ನನ್ನ ಮೈಕೈಗೆ ಹೊಡೆದ ಎಂದರೆ ಸರಿಯಲ್ಲ. 5 ನೇ ಆರೋಪಿ ಕೈಯಿಂದ ನನ್ನ ಕೆನ್ನೆಗೆ ಹೊಡೆದು ನಂತರ ಚಾಸ 2 ರವರಿಗೆ ಕಾಲಿನಿಂದ ಸೊಂಟಕ್ಕೆ ಒದ್ದ ಎಂದರೆ ಸರಿಯಲ್ಲ. ಆರೋಪಿತರು ಅವಾಚ್ಯವಾಗಿ ನಿಂದಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರೊಂದಿಗೆ ರಾಜಿ ಆಗಿದ್ದೇನೆ ಎಂದರೆ ಸರಿ. ರಾಜಿ ಆಗಿರುವ ಕಾರಣ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.

ಮರು ವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)**

**ಓದಿ ಹೇಳಿ ಕೇಳಿ ಸರಿ ಇದೆ**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಾಗರ.